ಕ್ರ.ಸ. 13

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ, ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

ಪಿಯುಸಿ ಪ್ರಾಯೋಗಿಕ ಪರೀಕ್ಷಾ ಉತ್ತರ ಪತ್ರಿಕೆಗಳನ್ನು ಸಹ ನೋಂದಾಯಿತ ಅಂಚೆ ಮೂಲಕ ಕರ್ನಾಟಕ ಶಾಲಾ ಪರೀಕ್ಷೆ ಹಾಗೂ ಮೌಲ್ಯ ನಿರ್ಣಯ ಮಂಡಲಿಗೆ ತಲುಪಿಸಲು ಅನುಮತಿ ನೀಡುವ ಕುರಿತು.

**ಉತ್ತರ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ಸುತ್ತೋಲೆ ಸಂಖ್ಯೆ: ಕಶಾಪ &ಮೌಮಂ/ದ್ವಿ.ಪ್ರಾ.ಪ/2022-23, ದಿನಾಂಕ:19/12/2022ರ ಪ್ರಕಾರ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಯ ಪತ್ರಿಕೆ ಬಂಡಲುಗಳನ್ನು ಖುದ್ದಾಗಿ ಮಂಡಲಿಗೆ ತಲುಪಿಸಲು ಸೂಚಿಸಲಾಗಿತ್ತು. ಆದರೆ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳು ಫೋನ್ ಕರೆ ಮಾಡಿ, ಖುದ್ದಾಗಿ ತಲುಪಿಸುವುದು ಕಷ್ಟವಾಗುತ್ತದೆ ಎಂದು ಮನವಿ ಮಾಡಿರುವ ಹಿನ್ನೆಲೆಯಲ್ಲಿ, ಎಲ್ಲಾ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳು ತಮ್ಮ ಕೇಂದ್ರದ ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳು ಮುಗಿದ ಮರುದಿನ ಉತ್ತರ ಪತ್ರಿಕೆ ಬಂಡಲ್‌ಗಳನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವುದು. ನಂತರ ಜಿಲ್ಲಾ ಉಪ ನಿರ್ದೇಶಕರುಗಳು ತಮ್ಮ ಜಿಲ್ಲೆಯ ಪ್ರಾಯೋಗಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಕ್ರೋಢೀಕರಿಸಿ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇಲ್ಲಿಗೆ ತಲುಪಿಸಲು ಸುತ್ತೋಲೆ ಸಂಖ್ಯೆ: ಕಶಾಪ&ಮೌ.ಮಂ/ಪ್ರಾ.ಪ.ತಿ/2022-23, ದಿನಾಂಕ:14/02/2023ರ ಪ್ರಕಾರ ಸೂಚಿಸಲಾಗಿರುತ್ತದೆ.

**(ಬಿ.ಸಿ. ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.

**ಸಂಖ್ಯೆ:ಇಪಿ 38 ಎಸ್‌ಎಲ್‌ಬಿ 2023**